ಸಣ್ಣ ಕೈಗಾರಿಕೆಗಳ ಪುನಶ್ಚೇತನ

404 - ಶ್ರೀ ಪೂಜಾರ್ ಪಿ.ಹೆಚ್. (ಬಾಗಲಕೋಟೆ) : ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸಣ್ಣ ಕೈಗಾರಿಕೆಗಳ ಪುನಶ್ಚೇತನಕ್ಕೆ ರಾಜ್ಯ ಸರ್ಕಾರವು ಪ್ರತ್ಯೇಕ ಕೈಗಾರಿಕಾ ನೀತಿ ರೂಪಿಸಲು ನಿಶ್ಚಯಿಸಿದೆಯೇ?*

ಆ) *ಹಾಗಿದ್ದಲ್ಲಿ ಅದು ಎಂದಿನಿಂದ ಜಾರಿಗೆ ಬರಲಿದೆ? ಇದುವರೆಗೂ ಇದರ ಬಗ್ಗೆ ಸರ್ಕಾರ ಮಾಡಿರುವ ಪ್ರಯತ್ನಗಳೇನು?*

ಶ್ರೀ ಎಸ್.ಆರ್. ಕಾಶಪ್ಪನವರ್ (ಸಣ್ಣ ಕೈಗಾರಿಕಾ ಸಚಿವರು) :

ಅ) ಹೌದು

ಆ) 1996ರಲ್ಲಿ ರೋಗಗ್ರಸ್ಥ ಸಣ್ಣ ಕೈಗಾರಿಕೆಗಳ ಪುನಶ್ಚೇತನಕ್ಕಾಗಿ ರಚಿಸಿದ ನೀತಿಯನ್ನು ಇನ್ನೂ ಪರಿಣಾಮಕಾರಿಯಾಗಿ ಮಾಡುವ ದೃಷ್ಟಿಯಿಂದ ಸದರಿ ನೀತಿಯ ಪರಿಷ್ಕರಣೆಗೆ ಇಲಾಖಾ ಮಟ್ಟದಲ್ಲಿ ಒಂದು ಉಪಸಮಿತಿಯನ್ನು ರಚಿಸಲಾಗಿದ್ದು, ಉಪ ಸಮಿತಿಯು ಎಲ್ಲಾ ಸದಸ್ಯರಿಂದ ಮತ್ತು ಹಣಕಾಸು ಸಂಸ್ಥೆಗಳಿಂದ ಸಲಹೆಗಳನ್ನು ಪಡೆದು ಕರಡು ನೀತಿಯನ್ನು ತಯಾರಿಸಲಾಗುತ್ತಿದೆ.

ಸಣ್ಣ ಉದ್ದಿಮೆಗಳ ಸಮಸ್ಯೆ

405 - ಶ್ರೀ ಪೂಜಾರ್ ಪಿ.ಹೆಚ್. (ಬಾಗಲಕೋಟೆ) : ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ ಸಣ್ಣ ಉದ್ದಿಮೆಗಳ ಸಮಸ್ಯೆಗಳನ್ನು ಪರಿಹರಿಸಲು ಮಾನ್ಯ ಮುಖ್ಯಮಂತ್ರಿಗಳು ವಿವಿಧ ಇಲಾಖೆಗಳ ಮುಖ್ಯಸ್ಥರ ಸಭೆ ಕರೆದು ಆದಾಲತ್ ನಡೆಸಲು ಯೋಚಿಸಿದ್ದಾರೆಯೇ?*

ಆ) *ಹಾಗಿದ್ದಲ್ಲಿ ಈ ರೀತಿ ಆದಾಲತ್ ನಡೆಸುವುದರಿಂದ ಸಣ್ಣ ಕೈಗಾರಿಕೆಗಳ ಪುನರುಜ್ಜೀವನಕ್ಕೆ ಅನುಕೂಲ ಆಗುವುದೆಂದು ಸರ್ಕಾರ ಭಾವಿಸಿದೆಯೇ?*

ಶ್ರೀ ಎಸ್.ಆರ್. ಕಾಶಪ್ಪನವರ್ (ಸಣ್ಣ ಕೈಗಾರಿಕಾ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಆಲಮಟ್ಟಿ ಜಲಾಶಯದಿಂದ ಮುಳುಗಡೆಯಾದ ಬಾಗಲಕೋಟೆ ನಗರದ ಅಭಿವೃದ್ಧಿ

406 - ಶ್ರೀ ಪೂಜಾರ್ ಪಿ.ಹೆಚ್. (ಬಾಗಲಕೋಟೆ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕಳೆದ 36 ವರ್ಷದಿಂದ ನೆನಗುದಿಗೆ ಬೀಳುತ್ತ ಬಂದ ಆಲಮಟ್ಟಿ ಜಲಾಶಯದ*